# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ : M/s Green Infra Wind Energy Limited ರವರಿಗೆ ತುಮಕೂರು ಜಿಲ್ಲೆಯ, ಪಾವಗಡ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Green Infra Clean Wind Power Limited ರವರಿಗೆ ವರ್ಗಾಯಿಸುವ ಕುರಿತು.

<u>ಓದಲಾಗಿದೆ</u>:

1. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 197 ಎನ್‌ಸಿಇ 2022, ದಿನಾಂಕ:07.05.2022
2. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರ ಪತ್ರ ಸಂಖ್ಯೆ: KREDL/08/GICWPL – 50.4 MW(GIWEL/Tumkur/F-54 (2022)/1159, ದಿನಾಂಕ:13.05.2022.

<u>ಪ್ರಸ್ತಾವನೆ:-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದನ್ವಯ M/s Green Infra Wind Energy Limited ರವರಿಗೆ ತುಮಕೂರು ಜಿಲ್ಲೆಯ, ಪಾವಗಡ ತಾಲ್ಲೂಕಿನ ಕೊಟ್ಟಗುಡ್ಡ, ಪೊನ್ನಸಮುದ್ರ, ಸಿಂಗರದಿಹಳ್ಳಿ, ಕೋಮಡರಹಳ್ಳಿ, ತೆಲಮಾರಂಗಿಹಳ್ಳಿ, ಕಾಡೆಪಲಕೆರೆ, ಹರಕ್ಯಾತನಹಳ್ಳಿ, ಅಚ್ಚಮ್ಮನಹಳ್ಳಿ ಮತ್ತು ಈರಮಲ್ಲಿ ಗ್ರಾಮಗಳಲ್ಲಿ 50.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್. ಇ.ಡಿ.ಎಲ್. ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Green Infra Wind Energy Limited ರವರಿಗೆ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 50.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆ/ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ M/s Green Infra Clean Wind Power Limited ರವರಿಗೆ ವರ್ಗಾಯಿಸುವ ಸಂಬಂಧ ನಿಯಮಾನುಸಾರ ಪರಿಶೀಲಿಸಿ, ನಿಗದಿತ ಶುಲ್ಕ ಪಾವತಿಸಿಕೊಂಡು, ಯೋಜನೆಯ ತಾಂತ್ರಿಕ ಮಾಹಿತಿಯೊಂದಿಗೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮುಂದುವರೆದು, M/s Green Infra Clean Wind Power Limited ಕಂಪನಿಯು ದಿನಾಂಕ:26.04.2022ರಂದು ನೊಂದಾವಣೆಗೊಂಡಿದ್ದು, ಇದರ ನೊಂದಾಯಿತ ಕಚೇರಿಯು ಹರಿಯಾಣದ ಗುರುಗ್ರಾಮದಲ್ಲಿ ಸ್ಥಾಪಿತಗೊಂಡಿದೆ. ಸದರಿ ಕಂಪನಿಯು M/s Green Infra Wind Energy Limited ರವರಿಂದ ಸ್ಥಾಪಿತವಾದ SPV ಸಂಸ್ಥೆಯಾಗಿರುತ್ತದೆ. M/s Green Infra Wind Energy Limited ಕಂಪನಿಯು ದಿನಾಂಕ:30.05.2011ರ ಆದೇಶದನ್ವಯ ನಿಗದಿತ ನೆಟ್‌ವರ್ತ್ ಹೊಂದಿರುವುದಾಗಿ ತಿಳಿಸುತ್ತಾರೆ.

ಕೆ.ಇ.ಆರ್.ಸಿ.ಯು ದಿನಾಂಕ:08.02.2022ರ ಆದೇಶದಲ್ಲಿ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಬ್ಯಾಂಕಿಂಗ್ ಸೌಲಭ್ಯವನ್ನು ಒಂದು ವರ್ಷದ ಅವಧಿಗೆ ನೀಡುವ ವಿಷಯದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:1061/2019 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ:9619-9637/2019ರಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ಆದೇಶಗಳಿಗೊಳಪಟ್ಟು ದಿನಾಂಕ:31.07.2022ರವರೆಗೆ ವಿಸ್ತರಿಸಿ ಆದೇಶಿಸಿರುತ್ತದೆ.

….2

N. mangalagi

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ :ಎನರ್ಜಿ 231 ಎನ್‌ಸಿಇ 2022**
**ಬೆಂಗಳೂರು ದಿನಾಂಕ:01.06.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Green Infra Wind Energy Limited ರವರಿಗೆ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 50.4 ಮೆ.ವ್ಯಾ ಸಾಮರ್ಥ್ಯವನ್ನು M/s Green Infra Clean Wind Power Limited ರವರಿಗೆ ಈ ಕೆಳಕಂಡ ಶೆಡ್ಯೂಲ್ ಹಾಗೂ ಷರತ್ತಿಗೊಳಪಟ್ಟು ವರ್ಗಾಯಿಸಿ ಆದೇಶಿಸಿದೆ.

**Tentative Latitude and Longitude of WTG Locations for 50.4 MW capacity Wind Power Project of M/s Green Infra Clean Wind Power Limited**

| Location No. | Latitude | Longitude |
|---|---|---|
| PVGKN 001 | 14° 10' 52.86" | 77° 11' 41.064" |
| PVGKN 002 | 14° 10' 6.24" | 77° 11' 43.296" |
| PVGKN 003 | 14° 9' 6.084" | 77° 11' 37.788" |
| PVGKN 004 | 14° 8' 27.06" | 77° 11' 57.3" |
| PVGKN 005 | 14° 7' 59.80" | 77° 12' 5.43" |
| PVGKN 006 | 14° 7' 33.6" | 77° 11' 38.43" |
| PVGKN 007 | 14° 7' 29.53" | 77° 12' 32.29" |
| PVGKN 008 | 14° 7' 36.89 | 77° 13' 23.37" |
| PVGKN 009 | 14° 8' 16.29" | 77° 13' 13.04" |
| PVGKN 010 | 14° 9' 26.38" | 77° 13' 7.53" |
| PVGKN 011 | 14° 9' 57.70" | 77° 13' 24.27" |
| PVGKN 012 | 14° 10' 31.65" | 77° 12' 42.67" |
| PVGKN 013 | 14° 11' 8.7" | 77° 13' 19.56" |
| PVGKN 014 | 14° 11' 46.17" | 77° 13' 27.3" |

**ಷರತ್ತುಗಳು**

1. M/s Green Infra Clean Wind Power Limited ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ:ಇಎನ್ 435 ಎನ್.ಸಿ.ಇ 2011, ದಿನಾಂಕ:06.01.2012ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಪೂರಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2. M/s Green Infra Clean Wind Power Limited ರವರು ಯೋಜನೆಯ ವರ್ಗಾವಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿಪಡಿಸಿರುವ ವರ್ಗಾವಣೆ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

3. ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27ರನ್ವಯ ಅಭಿವೃದ್ಧಿದಾರರು ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

....3

4. M/s Green Infra Clean Wind Power Limited ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಕುರಿತು ಕೆಪಿಟಿಸಿಎಲ್/ಸಂಬಂಧಿಸಿದ ಎಸ್ಕಾಂಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
5. M/s Green Infra Clean Wind Power Limited ಕಂಪನಿಯವರಿಗೆ ಮಂಜೂರಾಗಿರುವ 50.4 ಮೆ.ವ್ಯಾ. ಸಾಮರ್ಥ್ಯವನ್ನು 14 ಸಂಖ್ಯೆಯ ವಿಂಡ್ ಟರ್ಬೈನ್ ಗಳನ್ನು ಅಳವಡಿಸಲು ಪ್ರತಿ ಟರ್ಬೈನ್‌ಗೆ 4 ಎಕರೆಯಂತೆ ಒಟ್ಟು 56 ಎಕರೆ (14 WTGs x 4 Acres = 56 acres) ಜಮೀನನ್ನು ಉಪಯೋಗಿಸತಕ್ಕದ್ದು.
6. ಅಭಿವೃದ್ಧಿದಾರರು ತಮ್ಮ ಕಂಪನಿಗೆ ಮಂಜೂರಾಗಿರುವ ಯೋಜನೆಯನ್ನು MNRE ರವರ ಮಾರ್ಗಸೂಚಿಯಂತೆ, (Micro Siting Guidelines) ಅಳವಡಿಸಿಕೊಂಡು, ಪವನ ವಿದ್ಯುತ್ ಘಟಕಗಳ ಅಂತರವನ್ನು ನಿಗದಿಗೊಳಿಸಿ ಅನುಷ್ಠಾನಗೊಳಿಸತಕ್ಕದ್ದು.
7. ಈ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 197 ಎನ್‌ಸಿಇ 2022, ದಿನಾಂಕ:07.05.2022ರಲ್ಲಿನ ಷರತ್ತುಗಳು ಯಥಾವತ್ತಾಗಿ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. mangalagowri 1/6/22
(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
1/6/22

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ, ಇಲಾಖೆ/ ಕಂದಾಯ ಇಲಾಖೆ/ಬಹುಮಹಡಿ ಕಟ್ಟಡ/ವಿಕಾಸಸೌಧ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
5. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
6. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ತುಮಕೂರು ಜಿಲ್ಲೆ, ತುಮಕೂರು.
8. M/s Green Infra Clean Wind Power Limited, 5th Floor, Tower C, Building No.8, DLF Cybercity, Gurugram-122002.
9. M/s Green Infra Wind Energy Limited, 5th Floor, Tower C, Building No.8, DLF Cybercity, Gurugram-122002.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
11. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು